# ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

## ಸಿ.ಸಿ.506/2018

ಸಾಕ್ಷಿದಾರರ ಹೇಳಿಕೆಃ

| | | | |
|---|---|---|---|
| **ಹೆಸರು** | : | ಜೆ. ರಮೇಶ್ | ಚಾಸಾಃ **23** ಪ್ರಾಸಾಃ **6** |
| **ತಂದೆಯ ಹೆಸರು** | : | ಎಂ .ಜಯರಾಮಪ್ಪ | |
| **ವಯಸ್ಸು** | : | 46 ವರ್ಷ | |
| **ವೃತ್ತಿ** | : | ಪಿ ಐ | |
| **ವಾಸಸ್ಥಳ** | : | ಬೆಂಗಳೂರು | |

ದಿನಾಂಕಃ **22-01-2026** ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ :-ಮಾನ್ಯ ಸ.ಸ.ಅ. ರವರಿಂದ:-

ನಾನು ಡಿಸೆಂಬರ್ 2015 ರಿಂದ ಅಕ್ಟೋಬರ್ 2018 ರವರೆಗೆ ಹೊನ್ನಾಳಿ ವೃತ್ತದಲ್ಲಿ ವೃತ್ತ ನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿದ್ದೆನು.

ದಿಃ 30-08-2017 ರಂದು ಈ ಪ್ರಕರಣದ ಕಡತವನ್ನು ಚಾಸಾ-22 ರವರಿಂದ ಪಡೆದುಕೊಂಡು ಅಲ್ಲಿಯವರೆಗೂ ಆದ ತನಿಖೆಯನ್ನು ಪರಿಶೀಲಿಸಿ ತನಿಖೆಯನ್ನು ಮುಂದುವರೆಸಿ, ನಂತರ ನಮ್ಮ ಠಾಣೆಯ ಆವರಣದಲ್ಲಿ ಅಪಘಾತಕ್ಕೀಡಾದ ಕೆಎ-17/ಎ-1966 ಲಗೇಜ್ ಆಟೋ ಮತ್ತು ಕೆಎ-14/ಇಜಿ-1577 ಮೋಟಾರ್ ಸೈಕಲ್ ಅನ್ನು ಅಮಾನತ್ತು ಪಡಿಸಿಕೊಳ್ಳಲು ಚಾಸಾ-11 ಮತ್ತು 12 ರವರಿಗೆ ನೋಟೀಸನ್ನು ಜಾರಿ ಮಾಡಿ ನಂತರ ಚಾಸಾ-11 ಮತ್ತು 12 ರವರ ಸಮಕ್ಷಮ ಅಮಾನತ್ತು ಮಹಜರ್ ಕ್ರಮವನ್ನು ಬೆಳಗ್ಗೆ 10-45 ರಿಂದ 11-45 ಗಂಟೆ ಸಮಯದಲ್ಲಿ ಜರುಗಿಸಿ ಛಾಯಾಚಿತ್ರಗಳನ್ನು ತೆಗೆದಿರುತ್ತೇನೆ. ಅದೇ ದಿನ ಚಾಸಾ-1, 6, 7 ಮತ್ತು 8 ರವರ

ಮರುಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ಚಾಸಾ-11 ಮತ್ತು 12 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ಚಾಸಾ-20 ರವರಿಂದ ವಾಹನ ಪಂಚನಾಮೆಯ ಸಮಯದಲ್ಲಿ ಛಾಯಾಚಿತ್ರಗಳನ್ನು ತೆಗೆದ ಬಗ್ಗೆ 65 ಬಿ ಪ್ರಮಾಣ ಪತ್ರವನ್ನು ಪಡೆದುಕೊಂಡಿರುತ್ತೇನೆ.

ದಿಃ 15-09-2017 ರಂದು ಆರೋಪಿಯು ಸ್ವ ಇಚ್ಛೆಯಿಂದ ಠಾಣೆಗೆ ಹಾಜರಾಗಿದ್ದು ನಂತರ ಆರೋಪಿಗೆ ನೋಟೀಸನ್ನು ಜಾರಿ ಮಾಡಿ ಅವರಿಂದ ಪ್ರತ್ಯುತ್ತರವನ್ನು ಮತ್ತು ನಷ್ಟಭರ್ತಿ ಮುಚ್ಚಳಿಕೆ ಪತ್ರವನ್ನು ಪಡೆದುಕೊಂಡು ಆಟೋವನ್ನು ಅವರ ವಶಕ್ಕೆ ಬಿಟ್ಟುಕೊಟ್ಟು ನಂತರ ಆತನ ವಿರುದ್ಧ ದಸ್ತಗಿರಿ ಕ್ರಮವನ್ನು ಅನುಸರಿಸಿ, ಠಾಣಾ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ.

ದಿಃ 03-10-2017 ರಂದು ಚಾಸಾ-16 ರವರಿಗೆ ನೋಟೀಸನ್ನು ಜಾರಿ ಮಾಡಿ ಅವರಿಂದ ಪ್ರತ್ಯುತ್ತರವನ್ನು, ದಾಖಲಾತಿಗಳನ್ನು ಮತ್ತು ನಷ್ಟಭರ್ತಿ ಮುಚ್ಚಳಿಕೆ ಪತ್ರವನ್ನು ಪಡೆದುಕೊಂಡು ಮೋಟಾರ್ ಸೈಕಲ್ ಅನ್ನು ಅವರ ವಶಕ್ಕೆ ಬಿಟ್ಟುಕೊಟ್ಟಿರುತ್ತೇನೆ.

ದಿಃ 05-12-2017 ರಂದು ಮೃತ ಸಿದ್ದಲಿಂಗಪ್ಪರವರ ಪಿ ಎಂ ವರದಿಯನ್ನು ಚಾಸಾ-18 ರವರಿಂದ ಪಡೆದುಕೊಂಡಿರುತ್ತೇನೆ. ಚಾಸಾ-17 ರವರಿಂದ ಐ ಎಂ ವಿ ವರದಿಯನ್ನು ಪಡೆದುಕೊಂಡಿರುತ್ತೇನೆ. ನಂತರ ಆರೋಪಿತರ ವಿರುದ್ಧ ಆರೋಪ ಸಾಭೀತಾಗಿದ್ದರಿಂದ, ದೋಷರೋಪಣಾ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ನ್ಯಾಯಾಲಯದ ಮುಂದಿರುವ ಆರೋಪಿಯನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ.

ಪಿ ಎಂ ವರದಿಯನ್ನು ನಿಪಿ-9 ಎಂದು, ಸಾಕ್ಷಿಯ ಸಹಿಯನ್ನು ನಿಪಿ-9(ಎ) ಎಂದು, 65 ಬಿ ಪ್ರಮಾಣ ಪತ್ರವನ್ನು ನಿಪಿ-10 ಎಂದು, ಸಾಕ್ಷಿಯ ಸಹಿಯನ್ನು ನಿಪಿ-10(ಎ) ಎಂದು, ಆರೋಪಿಗೆ ಕೊಟ್ಟ ನೋಟೀಸನ್ನು ನಿಪಿ-11 ಎಂದು, ಸಾಕ್ಷಿಯ ಸಹಿಯನ್ನು ನಿಪಿ-11(ಎ) ಎಂದು, ಆರೋಪಿ ಕೊಟ್ಟ ಪ್ರತ್ಯುತ್ತರವನ್ನು ನಿಪಿ-12 ಎಂದು, ಸಾಕ್ಷಿಯ ಸಹಿಯನ್ನು ನಿಪಿ-12(ಎ) ಎಂದು, ಚಾಸಾ-16 ರವರಿಗೆ ನೀಡಿದ ನೋಟೀಸನ್ನು ನಿಪಿ-13 ಎಂದು, ಸಾಕ್ಷಿಯ ಸಹಿಯನ್ನು ನಿಪಿ-13(ಎ) ಎಂದು, ಚಾಸಾ-14 ರವರು ನೀಡಿದ ಪ್ರತ್ಯುತ್ತರವನ್ನು ನಿಪಿ-14 ಎಂದು, ಸಾಕ್ಷಿಯ ಸಹಿಯನ್ನು ನಿಪಿ-14(ಎ) ಎಂದು, ಐ ಎಂ ವಿ ವರದಿಯನ್ನು ನಿಪಿ-15 ಎಂದು, ಸಾಕ್ಷಿಯ ಸಹಿಯನ್ನು ನಿಪಿ-15(ಎ) ಎಂದು, ಆರೋಪಿಯು ಬರೆದುಕೊಟ್ಟ ಮುಚ್ಚಳಿಕೆ ಪತ್ರವನ್ನು ನಿಪಿ-16 ಎಂದು, ಸಾಕ್ಷಿಯ ಸಹಿಯನ್ನು ನಿಪಿ-

16(ಎ) ಎಂದು, ಚಾಸಾ-16 ರವರು ಬರೆದುಕೊಟ್ಟ ಮುಚ್ಚಳಿಕೆ ಪತ್ರವನ್ನು ನಿಪಿ-17 ಎಂದು, ಸಾಕ್ಷಿಯ ಸಹಿಯನ್ನು ನಿಪಿ-17(ಎ) ಎಂದು, ಚಾಸಾ-11 ಮತ್ತು 12 ರವರಿಗೆ ನೀಡಿದ ನೋಟೀಸನ್ನು ನಿಪಿ-18 ಎಂದು, ಸಾಕ್ಷಿಯ ಸಹಿಯನ್ನು ನಿಪಿ-18(ಎ) ಎಂದು, ವಾಹನ ಅಮಾನತ್ತು ಮಹಜರ್ ಅನ್ನು ಈಗಾಗಲೇ ನಿಪಿ-4 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-4(ಸಿ) ಎಂದು, ವಾಹನ ಅಮಾನತ್ತು ಮಹಜರ್ ಸಮಯದಲ್ಲಿ ತೆಗೆದ ನಿಪಿ-5 ಛಾಯಾಚಿತ್ರವನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ. ಆಟೋದ 2 ಛಾಯಾಚಿತ್ರಗಳನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ-19 ಮತ್ತು 20 ಎಂದು, ಚಾಸಾ-11 ರವರ ಹೇಳಿಕೆಯನ್ನು  ಈಗಾಗಲೇ ನಿಪಿ-7 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-7(ಎ) ಎಂದು, ಚಾಸಾ-8 ರವರ ಹೇಳಿಕೆಯನ್ನು ಈಗಾಗಲೇ ನಿಪಿ-8 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-8(ಎ) ಎಂದು ಗುರುತಿಸಲಾಯಿತು.

<u>ಪಾಟೀ ಸವಾಲು:- ಆರೋಪಿ ಪರ ವಕೀಲರರಿಂದ:-</u>

ಪ್ರಥಮ ವರ್ತಮಾನ ವರದಿಯಲ್ಲಿ ಮೃತ ಸಿದ್ದಲಿಂಗಯ್ಯರವರನ್ನು 1 ನೇ ಆರೋಪಿಯಾಗಿ ಮಾಡಿದ್ದೀರಿ ಎಂದರೆ ಸರಿ. ಚಾಸಾ-1 ರವರು ಪೊಲೀಸರಿಗೆ ದೂರನ್ನು ಸಿದ್ದಲಿಂಗಯ್ಯರವರು ಸ್ವತಃ ಬೈಕಿನಿಂದ ಬಿದ್ದು ಅಪಘಾತ ಮಾಡಿಕೊಂಡಿದ್ದಾರೆ ಎಂದು ದೂರನ್ನು ಸಲ್ಲಿಸಿದ್ದಾರೆ ಎಂದರೆ ಸರಿ. ನಿಪಿ-9 ಪಿ ಎಂ ವರದಿಯಲ್ಲಿ ಪೊಲೀಸರಿಂದ ದೊರೆತ ಮಾಹಿತಿಯಂತೆ ಮೃತ ಸಿದ್ದಲಿಂಗಯ್ಯರವರು ಬೈಕನ್ನು ಅತೀವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ನಿಯಂತ್ರಣ ತಪ್ಪಿ ಬೈಕ್ ಸ್ಕಿಡ್ ಆಗಿ ಅಪಘಾತ ಮಾಡಿಕೊಂಡಿದ್ದಾರೆ ಎಂದು ನಮೂದಾಗಿದೆ ಎಂದರೆ ಸರಿ. ಚಾಸಾ-6 ರಿಂದ 8 ರವರು ಸಹ ಮೇಲ್ಕಂಡ ರೀತಿಯಲ್ಲಿ ಅಂದರೆ ಸಿದ್ದಲಿಂಗಯ್ಯರವರು ಸ್ವತಃ ಅಪಘಾತ ಮಾಡಿಕೊಂಡಿದ್ದಾರೆ ಎಂದು ಹೇಳಿಕೆಯನ್ನು ನೀಡಿದ್ದಾರೆ ಎಂದರೆ ಸರಿ. ಸಾಕ್ಷಿಯು ಮುಂದುವರೆದು ಚಾಸಾ-6 ರಿಂದ 8 ರವರು ತಮ್ಮ ಮರುಹೇಳಿಕೆಯಲ್ಲಿ ಸಿದ್ದಲಿಂಗಯ್ಯರವರು ಸ್ವತಃ ಅಪಘಾತವನ್ನು ಮಾಡಿಕೊಂಡಿಲ್ಲ ಆರೋಪಿಯು ಭರ್ಮಪ್ಪ ಆಟೋವನ್ನು ಅತೀವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಡಿಕ್ಕಿ ಪಡಿಸಿ ಅಪಘಾತ ಮಾಡಿದ್ದಾರೆ ಎಂದು ನೀಡಿದ್ದಾರೆ ಎಂದು ನುಡಿಯುತ್ತಾರೆ. ಚಾಸಾ-6 ರಿಂದ 8 ರವರು ಸಿ ಸಿ ಕ್ಯಾಮೆರಾದಲ್ಲಿ ಅಪಘಾತವಾಗಿರುವುದನ್ನು ನೋಡಿ ತದನಂತರ ನನ್ನ ಮುಂದೆ ಮರುಹೇಳಿಕೆಯನ್ನು ಕೊಟ್ಟಿರುತ್ತಾರೆ. ಸದರಿ ಸಿ ಸಿ ಕ್ಯಾಮೆರಾವನ್ನು ನಾನು ಪರಿಶೀಲನೆ ಮಾಡಿರುವುದಿಲ್ಲ. ಸದರಿ ಸಿ ಸಿ ಕ್ಯಾಮೆರಾವನ್ನು ಪರಿಶೀಲನೆ ಮಾಡಲು ನನಗೆ ಯಾವುದೇ ತೊಂದರೆ ಇರುವುದಿಲ್ಲ. ಆರೋಪಿಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲದಿದ್ದರೂ ಸಹ

ಮತ್ತು ಚಾಸಾ-6 ರಿಂದ 8 ರವರು ಯಾವುದೇ ಮರುಹೇಳಿಕೆಯನ್ನು ಕೊಡದಿದ್ದರೂ ಸಹ ನಮ್ಮ ಠಾಣೆಯಲ್ಲಿ ಈ ಪ್ರಕರಣಕ್ಕೋಸ್ಕರ ನಾನೇ ಸೃಷ್ಟಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ಸ್ಥಳ ಪಂಚನಾಮೆಯನ್ನು ಯಾರು ಮಾಡಿದ್ದರು ಎಂಬ ಪ್ರಶ್ನೆಗೆ ಸಾಕ್ಷಿಯು ನನ್ನ ಮೌಖಿಕ ಆದೇಶದ ಮೇರೆಗೆ ಚಾಸಾ-21 ರವರು ಮಾಡಿರುತ್ತಾರೆ ಎಂದು ನುಡಿಯುತ್ತಾರೆ. ನಾನು ಅಪಘಾತವಾದ ಸ್ಥಳಕ್ಕೆ ಭೇಟಿ ಕೊಟ್ಟಿಲ್ಲ. ಚಾಸಾ-6 ರಿಂದ 8 ರವರ ಮರುಹೇಳಿಕೆಯನ್ನು ಪಡೆದ ನಂತರ ಅಪಘಾತವಾದ ಸ್ಥಳಕ್ಕೆ ಭೇಟಿ ನೀಡಿ ತನಿಖೆ ಮಾಡಲು ಯಾವುದೇ ತೊಂದರೆ ಇರುವುದಿಲ್ಲ. ಸ್ಥಳ ಮಹಜರ್ ನಲ್ಲಿ ಆಟೋ ನಂ.ಕೆಎ-17/ಎ-1196 ಮತ್ತು ಕೆಎ-17/ಎ-1966 ಎಂದು ನಮೂದಾಗಿದೆ ಎಂದರೆ ಸರಿ. ಸಾಕ್ಷಿಯು ಮುಂದುವರೆದು ಕೈ ತಪ್ಪಿನಿಂದ ನಮೂದಾಗಿರುತ್ತದೆ ಎಂದು ನುಡಿಯುತ್ತಾರೆ. ಸ್ಥಳ ಪಂಚನಾಮೆಯಲ್ಲಿ ಆಟೋ ನಂಬರ್ ತಪ್ಪಾಗಿ ನಮೂದಾಗಿರುವ ಬಗ್ಗೆ ನನ್ನ ಗಮನಕ್ಕೆ ಬಂದಿರುವುದಿಲ್ಲ. ನಾನು ಈ ಪ್ರಕರಣದಲ್ಲಿ ದಾಖಲೆಗಳನ್ನು ಸಂಪೂರ್ಣವಾಗಿ ಪರಿಶೀಲನೆ ಮಾಡದೇ ತರಾತುರಿಯಲ್ಲಿ ಸುಳ್ಳು ದೋಷರೋಪಣಾ ಪಟ್ಟಿಯನ್ನು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ಆರೋಪಿಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲದಿದ್ದರೂ ಸಹ ಮೃತನ ಕುಟುಂಬಕ್ಕೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ತನಿಖೆಯನ್ನು ನಡೆಸಿ ಸುಳ್ಳು ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿದಾರರ ಮರುಹೇಳಿಕೆಗಳನ್ನು ಪಡೆದುಕೊಂಡಿಲ್ಲ ಮತ್ತು ವಾಹನ ಅಮಾನತ್ತು ಪಂಚನಾಮೆಯನ್ನು ಜರುಗಿಸಿಲ್ಲ ಎಂದರೆ ಸರಿಯಲ್ಲ. ಮೃತನ ಪಿ ಎಂ ವರದಿ ಮತ್ತು ವಾಹನಗಳ ಐ ಎಂ ವಿ ವರದಿಯನ್ನು ಸ್ವೀಕರಿಸಿಲ್ಲ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ .

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.